ಅಕ್ಷರ ವಿಜೇತ
ನಿಜ ನಿರ್ಭಯ ನಿಷ್ಪಕ್ಷ ಎಡಿಟರ್: ಅನಿಲ್‌ಕುಮಾರ್

Sunday 31 August 2025 RNI: TELTEL/2021/81079 website: www.Vijethadaily.com

# ರೈತರಿಗೆ ಭರ್ಜರಿ ಗುಡ್ ನ್ಯೂಸ್; ಲಕ್ಷಾಂತರ ರೈತರಿಗೆ ಕೊಟ್ಯಂತರ ರೂ ಸಾಲ ವಿತರಣೆ!

**ಅಕ್ಷರ್ ವಿಜೇತ ,ಬೆಂಗಳೂರು :**

ಬೆಂಗಳೂರು, ಆಗಸ್ಟ್ 30: ಕಾಂಗ್ರೆಸ್ ಹೈಕಮಾಂಡ್ ಸೂಚನೆ ಮೇರೆಗೆ ಸಚಿವರ ಸ್ಥಾನಕ್ಕೆ ಸಹಕಾರಿ ಸಚಿವರಾದ ಕೆ ಎನ್ ರಾಜಣ್ಣ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಸಹಕಾರ ಸಚಿವರಾಗಿದ್ದ ಕೆ.ಎನ್.ರಾಜಣ್ಣ ವಜಾಗೊಂಡ ನಂತರ ಮೊದಲ ಪ್ರಗತಿ ಪರಿಶೀಲನಾ ಸಭೆಯನ್ನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಡೆಸಿದ್ದು, ರಾಜ್ಯದ ರೈತರಿಗೆ ಭರ್ಜರಿ ಗುಡ್ ನ್ಯೂಸ್ ನೀಡಿದ್ದಾರೆ. ಸಹಕಾರಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ಮಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಗೃಹಕಚೇರಿ ಕೃಷ್ಣಾದಲ್ಲಿ ಸಹಕಾರ ಇಲಾಖೆ ಪ್ರಗತಿ ಪರಿಶೀಲನೆ ಸಭೆ ಮಾಡಲಾಗಿದೆ. ಕರ್ನಾಟಕದಲ್ಲಿ ಪ್ರಸ್ತುತ ಸಾಲಿನಲ್ಲಿ 37ಲಕ್ಷ ರೈತರಿಗೆ ರೂ. 28 ಸಾವಿರ ಕೋಟಿ ಸಾಲ ವಿತರಣೆಯ ಗುರಿ ಹೊಂದಲಾಗಿದ್ದು, ಜುಲೈ ಅಂತ್ಯದವರೆಗೆ 8,69,284 ರೈತರಿಗೆ ರೂ.8,362.68 ಕೋಟಿ ಸಾಲ ವಿತರಣೆ ಮಾಡಲಾಗಿದೆ. ರೈತರಿಗೆ ಸಕಾಲದಲ್ಲಿ ಕೃಷಿ ಸಾಲ ಸಿಗುವುದನ್ನು ಪ್ರತಿ ಜಿಲ್ಲೆಯಲ್ಲೂ ಖಾತ್ರಿಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.



ರಾಜ್ಯದಲ್ಲಿ ಪ್ರಸ್ತುತ ಸಾಲಿನಲ್ಲಿ 37ಲಕ್ಷ ರೈತರಿಗೆ ರೂ.28ಸಾವಿರ ಕೋಟಿ ಸಾಲ ವಿತರಣೆ ಗುರಿ ಹೊಂದಲಾಗಿದ್ದು, ಜುಲೈ ಅಂತ್ಯದವರೆಗೆ 8,69,284 ರೈತರಿಗೆ ರೂ.8362.68 ಕೋಟಿ ಸಾಲ ವಿತರಣೆ ಮಾಡಲಾಗಿದೆ. ರೈತರಿಗೆ ಸಕಾಲದಲ್ಲಿ ಕೃಷಿ ಸಾಲವನ್ನು ಸಿಗುವುದನ್ನು ಖಾತ್ರಿಪಡಿಸಬೇಕು ಎಂದು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.ನಬಾರ್ಡ್ ರಿಯಾಯಿತಿ ಬಡ್ಡಿ ದರದ ಸಾಲದ ಮಿತಿಯನ್ನು ಹಿಂದಿನ ಸಾಲಿನಲ್ಲಿದ್ದ ರೂ.5,600 ಕೋಟಿಗಳಿಂದ ರೂ.3,236.11 ಕೋಟಿಗೆ ಅಂದರೆ ಶೇ.42.21ರಷ್ಟು ಕಡಿಮೆ ಮಾಡಿದೆ. ಆದರೂ ಸಾಲ ವಿತರಣೆಯಲ್ಲಿ ಶೇ.96.07 ರಷ್ಟು ಪ್ರಗತಿ ಸಾಧಿಸಲಾಗಿದೆ. 2024-25ನೇ ಸಾಲಿನಲ್ಲಿ 29,75,598 ರೈತರಿಗೆ 25,939.09 ಕೋಟಿ ಕೃಷಿ ಸಾಲ ವಿತರಣೆ ಮಾಡಲಾಗಿದೆ.ರಾಜ್ಯದಲ್ಲಿ 28516 ಸಹಕಾರ ಸಂಘಗಳು ಲಾಭದಲ್ಲಿದ್ದು, 14,670 ಸಂಘಗಳು ನಷ್ಟದಲ್ಲಿವೆ. ಸಾಲ ವಸೂಲಾತಿ ಸರಿಯಾಗಿ ಆಗದ ಕಾರಣ ಬಹುತೇಕ ಸಂಘಗಳು ನಷ್ಟದಲ್ಲಿದ್ದು, ಅಂತಹ ಸಾಲ ವಸೂಲಾತಿಗೆ ಕೈಗೊಂಡ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಬೇಕು. ಇದರಲ್ಲಿ 2200 ಹಾಲು ಉತ್ಪಾದಕ ಸಂಘಗಳು ನಷ್ಟದಲ್ಲಿವೆ. ಹಾಲು ಉತ್ಪಾದಕ ಸಹಕಾರ ಸಂಘಗಳ ವೆಚ್ಚದ ಮೇಲೆ ನಿಗಾ ಇರಿಸಬೇಕು.

ಹಾಲು ಉತ್ಪಾದನೆಯನ್ನು ಹೆಚ್ಚಿಸುವುದು ಸಂಘಗಳ ಕಾರ್ಯದರ್ಶಿಗಳ ಜವಾಬ್ದಾರಿ. ಹಾಲು ಉತ್ಪಾದಕ ಸಹಕಾರ ಸಂಘಗಳ ಪುನಶ್ಚೇತನಕ್ಕೆ ಕ್ರಮ ಕೈಗೊಳ್ಳಬೇಕು.ಕನ್ನಡ ಸಾಹಿತ್ಯ ಪರಿಷತ್ನ ಅವ್ಯವಹಾರಗಳ ಕುರಿತು ಡಿಆರ್ಸಿಎಸ್ ತನಿಖೆ ನಡೆಸುತ್ತಿದೆ. ತನಿಖೆ ನಡೆಯುತ್ತಿರುವ ಸಂದರ್ಭದಲ್ಲೇ ಕೆಲವು ಸದಸ್ಯರ ಸದಸ್ಯತ್ವವನ್ನು ಪರಿಷತ್ ರದ್ದುಪಡಿಸುತ್ತಿರುವ ಕುರಿತು ದೂರುಗಳು ಬಂದಿದ್ದು, ಈ ಕುರಿತು ಕಾನೂನು ಪ್ರಕಾರ ಕ್ರಮ ಕೈಗೊಳ್ಳಲು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.• ಸಹಕಾರ ಸಂಘಗಳ ಹಿರಿಯ ನಿರೀಕ್ಷಕರ 126 ಹುದ್ದೆಗಳು ಹಾಗೂ ಸಹಕಾರ ಸಂಘಗಳ ನಿರೀಕ್ಷಕರ 403 ಹುದ್ದೆಗಳು ಖಾಲಿಯಿವೆ. ಹುದ್ದೆಗಳ ಭರ್ತಿಗೆ ಪ್ರಸ್ತಾವನೆ ಸಲ್ಲಿಸುವಂತೆ ಸೂಚನೆ.• ಸಹಕಾರ ಸಂಘಗಳ ನಿಬಂಧಕರ ಕಚೇರಿಯ ವ್ಯಾಪ್ತಿಯ ಸೇವೆಗಳನ್ನು ಗಣಕೀಕರಿಸುವ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು.

## ವಿಷ್ಣುವರ್ಧನ್ ಸ್ಮಾರಕದ ಭೂಮಿ ಸ್ವಾಧೀನದ ಬಗ್ಗೆ ಬಿಗ್ ಅಪ್‌ಡೇಟ್

### ಸಚಿವ ಖಂಡ್ರೆ ಹೇಳಿದ್ದೇನು?



ಭಾರಿ ವಿವಾದ ಹುಟ್ಟುಹಾಕಿರುವ ನಟ ವಿಷ್ಣುವರ್ಧನ್ ಸ್ಮಾರಕ ಜಾಗದ ವಿಚಾರವು ತಾರ್ಕಿಕ ಅಂತ್ಯ ಕಾಣುವ ಹಂತ ತಲುಪಿದೆ. ಅಭಿಮಾನ್ ಸ್ಟುಡಿಯೋದಲ್ಲಿದ್ದ ವಿಷ್ಣು ಸ್ಮಾರಕವನ್ನು ಇತ್ತೀಚೆಗೆ ತೆರವು ಮಾಡಿದ್ದು, ಅಭಿಮಾನಿಗಳ ಆಕ್ರೋಶಕ್ಕೆ ಕಾರಣವಾಗಿತ್ತು. ವಿಷ್ಣುವರ್ಧನ್ ಸಮಾಧಿ ಇದ್ದ ಅಭಿಮಾನ್ ಸ್ಟುಡಿಯೋದ ಆ **10** ಎಕರೆ ವಿವಾದದ ಜಾಗವನ್ನ ತಮಗೆ ಒಪ್ಪಿಸಬೇಕು ಎಂದು ಕಂದಾಯ ಇಲಾಖೆಗೆ ಅರಣ್ಯ ಇಲಾಖೆ ಪತ್ರ ಬರೆದಿದೆ. ಈ ಬಗ್ಗೆ ಅರಣ್ಯ ಸಚಿವ ಈಶ್ವರ ಖಂಡ್ರೆ ಮಹತ್ವದ ಮಾಹಿತಿ ಹಂಚಿಕೊಂಡಿದ್ದಾರೆ.

## ಹೆಲ್ಮೆಟ್ ಇಲ್ಲದಿದ್ರೆ ಪೆಟ್ರೋಲ್ ಸಿಗಲ್ಲ

### ಸೆಪ್ಟೆಂಬರ್ 1ರಿಂದಲೇ ಹೊಸ ನಿಯಮ



ಹೆಲ್ಮೆಟ್ ಧರಿಸಿ, ದ್ವಿಚಕ್ರ ವಾಹನ ಓಡಿಸಿ ಎಂದು ಸಂಚಾರ ಪೊಲೀಸರು ಅಭಿಯಾನ ಶುರು ಮಾಡಿ ದಶಕಗಳೇ ಉರುಳಿವೆ. ಆದರೂ ಅನೇಕರು ಹೆಲ್ಮೆಟ್ ಧರಿಸಿ ಅಂದ್ರೆ ಅಲರ್ಜಿ ಅಂತಾರೆ. ಹೆಲ್ಮೆಟ್ ರಹಿತ ಚಾಲನೆಗೆ ಭಾರಿ ದಂಡ ವಿಧಿಸುವ ಕೆಲಸವೂ ಚಾಲ್ತಿಯಲ್ಲಿದೆ. ಸಾವಿರಾರು ರೂಪಾಯಿ ದಂಡ ಬಿದ್ದರೂ ಹೆಲ್ಮೆಟ್ ಧರಿಸಲು ಇಂದಿಗೂ ಹಿಂದೇಟು ಹಾಕುವ ಬೈಕ್ ಸವಾರರು ಇದ್ದಾರೆ. ಹೀಗಾಗಿ ಸರ್ಕಾರವೇ "ಹೆಲ್ಮೆಟ್ ಇಲ್ಲದಿದ್ರೆ, ಪೆಟ್ರೋಲ್ ಇಲ್ಲ" ಎನ್ನುವ ಹೊಸ ನಿಯಮ ತರುತ್ತಿದೆ. ಸೆಪ್ಟೆಂಬರ್ 1ರಿಂದಲೇ ಈ ನಿಯಮ ಜಾರಿಯಾಗಲಿದ್ದು, ಹೆಲ್ಮೆಟ್ ಇಲ್ಲದೆ ಬಂಕ್‌ಗೆ ಬರುವ ಬೈಕ್‌ಗಳಿಗೆ ಪೆಟ್ರೋಲ್ ಸಿಗಲ್ಲ.



## ಕಾಂಗ್ರೆಸ್ ಪಕ್ಷ ಮತ ಕಳ್ಳತನ ಬಯಲು ಮಾಡಿದ ಸಿದ್ದರಾಮಯ್ಯ'

ಬೆಂಗಳೂರು, ಆಗಸ್ಟ್ **30**: ಕಾಂಗ್ರೆಸ್ ಪಕ್ಷದ ಮತ ಕಳ್ಳತನವನ್ನ ಸಿಎಂ ಸಿದ್ದರಾಮಯ್ಯ ಅವರು ಬಯಲು ಮಾಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಿಂದಿನ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಮತಗಳ್ಳತನ ಆಗಿದೆ ಎಂದು ಹೇಳಿದ್ದು, ಈ ಕುರಿತು ಜನತೆಗೆ ಉತ್ತರ ನೀಡಲಿ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದರು.

## ರಾಹುಲ್ ದ್ರಾವಿಡ್ ರಾಜೀನಾಮೆ: ರಾಜಸ್ಥಾನ್ ರಾಯಲ್ಸ್ ಸ್ಟಾರ್ ವೈಭವ್ ಸೂರ್ಯವಂಶಿಗೆ ಆಘಾತ

ಈಗಾಗಲೇ ಐಪಿಎಲ್ **2025** ಮುಕ್ತಾಯ ಆಗಿದ್ದು, ಈ ಆವೃತ್ತಿಯಲ್ಲಿ ಆರ್‌ಸಿಬಿ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಇನ್ನೂ **19**ನೇ ಆವೃತ್ತಿ ಆರಂಭಕ್ಕೂ ಮುನ್ನವೇ ಹಲವು ಫ್ರಾಂಚೈಸಿಗಳು ತಮ್ಮ ತಂಡಗಳಲ್ಲಿ ಬದಲಾವಣೆಗಳನ್ನು ಮಾಡಿಕೊಳ್ಳುವತ್ತ ಗಮನಹರಿಸಿವೆ. ಈ ನಡುವೆಯೇ ಬಲಿಷ್ಠ ರಾಜಸ್ಥಾನ್ ರಾಯಲ್ಸ್ ತಂಡದ ಕೋಚ್ ಸ್ಥಾನಕ್ಕೆ ಗುಡ್ ಬೈ ಹೇಳುವ ಮೂಲಕ ಕನ್ನಡಿಗ ರಾಹುಲ್ ದ್ರಾವಿಡ್ ಶಾಕ್ ಕೊಟ್ಟಿದ್ದಾರೆ. ಇದರಿಂದ ಆರ್‌ಆರ್ ಸ್ಟಾರ್ ವೈಭವ್ ಸೂರ್ಯವಂಶಿಗೆ ಆಘಾತವಾಗಿದೆ. ಯಾಕೆ ಅಂತೀರಾ? ಇಲ್ಲಿದೆ ನೋಡಿ ಮಾಹಿತಿ.ಕನ್ನಡಿಗ ರಾಹುಲ್ ದ್ರಾವಿಡ್ ಅವರು ಐಪಿಎಲ್ **2026** ಆರಂಭಕ್ಕೂ ಮುನ್ನವೇ ರಾಜಸ್ಥಾನ್ ರಾಯಲ್ಸ್ ತಂಡದ ಕೋಚ್ ಹುದ್ದೆಗೆ ದಿಢೀರ್ ರಾಜೀನಾಮೆ ಘೋಷಿಸಿದ್ದಾರೆ. ಇದರಿಂದ ಅಭಿಮಾನಿಗಳಿಗೆ ಆಘಾತ ಆದಂತಾಗಿದೆ.



## ವಿಷ್ಣುವರ್ಧನ್ ಸ್ಮಾರಕದ ಭೂಮಿ ಸ್ವಾಧೀನದ ಬಗ್ಗೆ ಬಿಗ್ ಅಪ್‌ಡೇಟ್:

ಅಕ್ಷರ್ ವಿಜೇತ ,ಬೆಂಗಳೂರು :

Indergarh- ವಿವಾದ ಸೃಷ್ಟಿಯಾದ ಹಿನ್ನೆಲೆ ಅಭಿಮಾನ್ ಸ್ಟುಡಿಯೋದ ಜಾಗವು ಅರಣ್ಯ ಇಲಾಖೆಗೆ ಸೇರಿದ್ದು ಎಂಬ ವಿಚಾರ ಬೆಳಕಿಗೆ ಬಂದಿದ್ದು, ಆ ಜಾಗವನ್ನು ಸರ್ಕಾರ ವಶಕ್ಕೆ ಪಡೆಯುವುದಾಗಿ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ಅಭಿಮಾನ್ ಸ್ಟುಡಿಯೋದ 10 ಎಕರೆ ಜಾಗವು ತಮ್ಮ ಇಲಾಖೆಗೆ ಸೇರಬೇಕು ಎಂದಿದ್ದಾರೆ.1970ರಲ್ಲಿ ಅರಣ್ಯ ಇಲಾಖೆಗೆ ಸೇರಿದ ಈ ಜಾಗವನ್ನು ಕಂದಾಯ ಇಲಾಖೆಯ ಮೂಲಕ ಸ್ಟುಡಿಯೋ ನಿರ್ಮಾಣಕ್ಕಾಗಿ ನಟ ಬಾಲಣ್ಣ ಅವರಿಗೆ ನೀಡಲಾಗಿತ್ತು. ಅದೇ ಸಮಯದಲ್ಲಿ ಸರ್ಕಾರ ಷರತ್ತುಗಳನ್ನೂ ಹಾಕಿತ್ತು. ಆದರೆ ಅದನ್ನು ಪಾಲಿಸಿಲ್ಲ, ಬದಲಾಗಿ ಅವರು ಉಲ್ಲಂಘಿಸಿದ್ದಾರೆ. ಇದೀಗ ಬಾಕಿ ಉಳಿದಿರುವ 10 ಎಕರೆ ಜಾಗವನ್ನು ಕಂದಾಯ ಇಲಾಖೆಯೇ ಮುಟ್ಟುಗೋಲು ಹಾಕಿಕೊಂಡು, ಅರಣ್ಯ ಇಲಾಖೆಗೆ ಒಪ್ಪಿಸಬೇಕಾಗಿದೆ. ಈ ಪ್ರಕ್ರಿಯೆ ಈಗಾಗಲೇ ನಡೆಯುತ್ತಿದೆ ಎಂದು ಹೇಳಿದ್ದಾರೆ.

ಆ ಜಾಗದಲ್ಲಿ ಟ್ರೀ ಪಾರ್ಕ್ ನಿರ್ಮಾಣ ಬಾಲಣ್ಣ ಅವರಿಗೆ ಈ ಭೂಮಿ ಹಸ್ತಾಂತರಿಸುವ ಮುನ್ನ ಕೆಲ ಷರತ್ತುಗಳನ್ನು ವಿಧಿಸಲಾಗಿತ್ತು. ಅದೆಲ್ಲವನ್ನೂ ಅವರು ಉಲ್ಲಂಘಿಸಿದ್ದಾರೆ. ಈಗ ಮತ್ತೆ ಮಾರಾಟ ಮಾಡಲು ಒಪ್ಪಂದ ಮಾಡಿಕೊಳ್ಳಲಾಗಿದೆ. ಇದು ಸಹ ಷರತ್ತಿನ ಉಲ್ಲಂಘನೆ. ಹೀಗಾಗಿ ಆ ಭೂಮಿಯನ್ನ ಅರಣ್ಯ ಇಲಾಖೆಗೆ ವಾಪಸ್ ಪಡೆಯಲು ಕಂದಾಯ ಇಲಾಖೆಗೆ ಕೇಳಲಾಗಿದೆ. ಅವರು ಆ ಜಾಗವನ್ನ ವಾಪಸ್ ನೀಡಿದರೆ ಆ ಜಾಗದಲ್ಲಿ ಒಂದು ಟ್ರೀ ಪಾರ್ಕ್ ಹಾಗೂ ಲಂಗ್ ಸ್ಪೇಸ್ ನಿರ್ಮಿಸಬೇಕು ಎಂದು ಯೋಜಿಸಿದ್ದೇವೆ ಎಂದಿದ್ದಾರೆ.

## ಹೆಲ್ಮೆಟ್ ಇಲ್ಲದಿದ್ರೆ ಪೆಟ್ರೋಲ್ ಸಿಗಲ್ಲ..ಸೆಪ್ಟೆಂಬರ್ 1ರಿಂದಲೇ ಹೊಸ ನಿಯಮ

ಅಕ್ಷರ್ ವಿಜೇತ ,ಬೆಂಗಳೂರು :

ಎಲ್ಲ ಬಂಕ್‌ಗಳಲ್ಲಿ ಇನ್ಮುಂದೆ ಪೆಟ್ರೋಲ್ ಹಾಕುವ ಮುನ್ನ ಸವಾರರು ಹೆಲ್ಮೆಟ್ ಧರಿಸಿದ್ದಾರೆಯೇ ಎಂದು ಖಚಿತಪಡಿಸಿಕೊಂಡು ನಂತರ ಪೆಟ್ರೋಲ್ ಹಾಕಲಿದ್ದಾರೆ. ಒಂದು ವೇಳೆ ಹೆಲ್ಮೆಟ್ ಧರಿಸದೆ ಪೆಟ್ರೋಲ್‌ಗಾಗಿ ಬಂದರೆ ಅವರಿಗೆ ಪೆಟ್ರೋಲ್ ಸಿಗಲ್ಲ. ಸವಾರರು ಅಪಘಾತಗಳಾಗದಂತೆ ನೋಡಿಕೊಳ್ಳಲು ಈ ಹೆಲ್ಮೆಟ್ ನಿಯಮವನ್ನು ಕಡ್ಡಾಯಗೊಳಿಸಲಾಗಿದೆ. ದ್ವಿಚಕ್ರ ವಾಹನ ಸವಾರರಿಗೆ ಎದುರಾಗುವ ರಸ್ತೆ ಅಪಘಾತಗಳನ್ನು ಕಡಿಮೆ ಮಾಡುವ ಉದ್ದೇಶದಿಂದ ಉತ್ತರ ಪ್ರದೇಶ ಸರ್ಕಾರವು ಸೆಪ್ಟೆಂಬರ್ 1ರಿಂದ 30ರವರೆಗೆ "ನೋ ಹೆಲ್ಮೆಟ್-ನೋ ಫ್ಯುಯೆಲ್" (No Helmet-No Fuel) ಎಂಬ ರಸ್ತೆ ಸುರಕ್ಷತಾ ಅಭಿಯಾನ ಪ್ರಾರಂಭಿಸಲಿದೆ. ಹೆಲ್ಮೆಟ್ ಧರಿಸದ ಯಾರಿಗೂ ಇಂಧನ ನೀಡದಂತೆ ರಾಜ್ಯಾದ್ಯಂತ ಪೆಟ್ರೋಲ್ ಪಂಪ್‌ಗಳಿಗೆ ನಿರ್ದೇಶನ ನೀಡಲಾಗಿದೆ.ಸ್ಥಳೀಯ ಪೊಲೀಸರು ಮತ್ತು ಪೆಟ್ರೋಲ್ ಪಂಪ್ ಸಂಘಗಳ ಸಹಯೋಗದೊಂದಿಗೆ ಉತ್ತರ ಪ್ರದೇಶದ ಎಲ್ಲ ಜಿಲ್ಲೆಗಳಲ್ಲಿ ಈ ಅಭಿಯಾನವನ್ನು ವಿಸ್ತರಿಸುವುದಾಗಿ ಸಾರಿಗೆ ಇಲಾಖೆ ತಿಳಿಸಿದೆ. ಈ ಒಂದು ತಿಂಗಳ ಅಭಿಯಾನದ ಸಮಯದಲ್ಲಿ ಹೆದ್ದಾರಿಗಳು ಮತ್ತು ನಗರ ಜಂಕ್ಷನ್‌ಗಳಂತಹ ಹೆಚ್ಚಿನ ಅಪಾಯದ ವಲಯಗಳಲ್ಲಿ ಈ ಅಭಿಯಾನಕ್ಕೆ ಒತ್ತು ನೀಡಲಾಗಿದೆ.





### ಸೆಪ್ಟೆಂಬರ್ 1ರಿಂದಲೇ ಹೊಸ ನಿಯಮ

ಹೆಲ್ಮೆಟ್‌ಗಳ ಗುಣಮಟ್ಟ ಕೂಡ ಕಳಪೆಯಾಗಿದ್ದು, ಸುಖಾ ಸುಮ್ಮನೆ ಬಿಐಎಸ್ ಗುರುತಿಲ್ಲದ ಹೆಲ್ಮೆಟ್‌ಗಳನ್ನ ಸವಾರರು ಬಳಸುತ್ತಿದ್ದಾರೆ. ನಕಲಿ ಹೆಲ್ಮೆಟ್ ತಯಾರಕರ ಹಾವಳಿ ಕೂಡ ಹೆಚ್ಚಾಗಿದ್ದು, ಬಿಐಎಸ್ ಪರವಾನಗಿಗಳನ್ನು ಹೊಂದಿರುವವರು ಕೂಡ ಕೇವಲ 110 ರೂಪಾಯಿ ಬೆಲೆಗೆ ಕಳಪೆ ಗುಣಮಟ್ಟದ ಹೆಲ್ಮೆಟ್‌ಗಳನ್ನು ಉತ್ಪಾದಿಸುತ್ತಾರೆ. ಇದು ಉತ್ತರಪ್ರದೇಶ, ಗಾಜಿಯಾಬಾದ್, ದೆಹಲಿಯಲ್ಲಿ ಮಿತಿಮೀರಿದೆ. ಈ ನಕಲಿ ಹೆಲ್ಮೆಟ್‌ಗಳು ಸವಾರರನ್ನು ಜೀವ ತೆಗೆಯುತ್ತಿವೆ ಎಂದು ಸಾರಿಗೆ ಇಲಾಖೆ ಕಳವಳ ವ್ಯಕ್ತಪಡಿಸಿದೆ.ಹೆಲ್ಮೆಟ್ ಧರಿಸದವರಿಗೆ ಪೆಟ್ರೋಲ್ ಪಂಪ್‌ಗಳಲ್ಲಿ ಇಂಧನ ನಿರಾಕರಿಸಲಾಗುವುದು. ಸವಾರರಿಗೆ ದಂಡ ವಿಧಿಸುವುದಲ್ಲ, ರಸ್ತೆ ಸುರಕ್ಷತೆಯನ್ನು ಉತ್ತೇಜಿಸುವುದು ಇದರ ಉದ್ದೇಶ. ಜಾರಿ ಸಂಸ್ಥೆಗಳಿಗೆ ಸಂಪೂರ್ಣ ಸಹಕಾರ ನೀಡಬೇಕು ಎಂದು ರಾಜ್ಯ ಸರ್ಕಾರ ಸಾರ್ವಜನಿಕರಲ್ಲಿ ಮನವಿ ಮಾಡಿದೆ. 1988ರ ಮೋಟಾರು ವಾಹನ ಕಾಯ್ದೆಯ ಸೆಕ್ಷನ್ 129ರಡಿ ವಾಹನ ಸವಾರರು ಮತ್ತು ಹಿಂಬದಿ ಪ್ರಯಾಣಿಕರಿಬ್ಬರಿಗೂ ಹೆಲ್ಮೆಟ್ ಕಡ್ಡಾಯವಾಗಿ ಧರಿಸಬೇಕು. ಇಲ್ಲದಿದ್ದರೆ ಇದೇ ಕಾಯ್ದೆಯ ಸೆಕ್ಷನ್ 194D ಅಡಿಯಲ್ಲಿ ದಂಡ ವಿಧಿಸಲು ಕೂಡ ಅವಕಾಶವಿದೆ ಎಂದು ಎಚ್ಚರಿಸಿದೆ.

## ರಾಹುಲ್ ದ್ರಾವಿಡ್ ರಾಜೀನಾಮೆ

ಅಲ್ಲದೆ, ಮತ್ತೊಂದೆಡೆ ಆರ್‌ಆರ್ ತಂಡದ ಸ್ಟಾರ್ ಹಾಗೂ ಯುವ ಆಟಗಾರ ವೈಭವ್ ಸೂರ್ಯವಂಶಿಗೂ ಆಘಾತ ಎದುರಾಂತಾಗಿದೆ. ಹೌದು.. ಹೊಸ ವೈಭವ್‌ನಲ್ಲಿದ್ದ ಹೊಸ ಪ್ರತಿಭೆಯನ್ನು ಹೊರತಂದಿದ್ದೇ ರಾಹುಲ್ ದ್ರಾವಿಡ್ ಅವರು.ಐಪಿಎಲ್ **2025** ಹರಾಜಿನಲ್ಲಿ **14** ವರ್ಷದ ವೈಭವ್ ಸೂರ್ಯವಂಶಿಯನ್ನು **1.1** ಕೋಟಿ ರೂಪಾಯಿಗೆ ರಾಜಸ್ಥಾನ್ ರಾಯಲ್ಸ್ ಫ್ರಾಂಚೈಸಿ ಖರೀದಿಸಿತ್ತು. ಇದೇ ವೇಳೆ ಈ ಚಿಕ್ಕ ಹುಡುಗನಿಗೆ ಇಷ್ಟೊಂದು ಹಣ ಕೊಟ್ಟು ತಗೊಂಡಿದ್ದಾರೆ. ಇವರು ಮೂರ್ಖರು ಎಂದು ಬಹುತೇಕ ಮಂದಿ ಮಾತನಾಡಿ ಅಣಕಿಸಿದ್ದರು. ಆದರೆ, ಈ ಮೊತ್ತಕ್ಕೆ ತಕ್ಕಂತೆ ವೈಭವ್ ಸೂರ್ಯವಂಶಿ ಅತ್ಯುತ್ತಮ ಪ್ರದರ್ಶನ ತೋರುವ ಮೂಲಕ ಎಲ್ಲಾ ಫ್ರಾಂಚೈಸಿಗಳು ಹಾಗೂ ಕ್ರೀಡಾಭಿಮಾನಿಗಳ ಗಮನ ಸೆಳೆದರು. ಇದಕ್ಕೆ ಪ್ರಮುಖ ಕಾರಣವೇ ಕನ್ನಡಿಗ ರಾಹುಲ್ ದ್ರಾವಿಡ್.ವೈಭವ್‌ಗೆ ಆಘಾತ: ಸಾಮಾನ್ಯವಾಗಿ ಐಪಿಎಲ್ ಸಮಯದಲ್ಲಿ ಹಿರಿಯ ಆಟಗಾರರಿದ್ದರೆ, ಕಿರಿಯರನ್ನು ಮುಂದೆ ತರುವುದೇ ಕಡಿಮೆ. ಆದರೆ, ರಾಜಸ್ಥಾನ್ ರಾಲಯಲ್ಸ್‌ನಲ್ಲಿ ಕೋಚ್ ರಾಹುಲ್ ದ್ರಾವಿಡ್ **14** ವರ್ಷದ ವೈಭವ್ ಸೂರ್ಯವಂಶಿಗೆ ಅವಕಾಶ ಕಲ್ಪಿಸಿಕೊಟ್ಟರು. ಜೊತೆಗೆ ಉತ್ತೇಜನ ನೀಡಿದರು. ಈ ಅವಕಾಶವನ್ನೇ ಸದುಪಯೋಗ ಪಡಿಸಿಕೊಂಡ ವೈಭವ್ ಅತ್ಯುತ್ತಮ ಪ್ರದರ್ಶನ ತೋರುವ ಮೂಲಕ ಗಮನ ಸೆಳೆದರು. ಇದೀಗ ಕನ್ನಡಿಗ ರಾಹುಲ್ ದ್ರಾವಿಡ್ ಕೋಚ್ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು, ಮುಂದೆ ಯಾರು ಇಷ್ಟರ ಮಟ್ಟಿದೆ ಬೆಂಬಲ ನೀಡುತ್ತಾರೆಯೋ ಎನ್ನುವುದು ವೈಭವ್‌ನಲ್ಲಿ ಕಾಡುವ ಪ್ರಶ್ನೆಯಾಗಿದೆ.ಐಪಿಎಲ್ **2026** ಆರಂಭಕ್ಕೆ ಇನ್ನೂ ತುಂಬಾ ಸಮಯ ಇದೆ. ಆದರೆ, ಹಲವು ಫ್ರಾಂಚೈಸಿಗಳು ಈಗಲೇ ತಮ್ಮ ತಂಡದಲ್ಲಿ ಬದಲಾವಣೆಗೆ ಮುಂದಾಗಿವೆ. ಈಗಾಗಲೇ ಟ್ರೇಡಿಂಗ್ ವಿಂಡೋವನ್ನ ಕೂಡ ತೆರೆಯಲಾಗಿದೆ. ಇದರ ಅಡಿಯಲ್ಲಿ ಫ್ರಾಂಚೈಸಿ, ಫ್ರಾಂಚೈಸಿಗಳ ನಡುವೆ ಆಟಗಾರರ ವಿನಮಯ ಮಾಡಿಕೊಳ್ಳ ಬಹುದು ಅಥವಾ ಆಟಗಾರರನ್ನು ಖರೀದಿ ಮಾಡಬಹುದು.ಈ ನಡುವೆಯೇ ಇದೀಗ ಐಪಿಎಲ್‌ನ ಬಲಿಷ್ಠ ತಂಡಗಳಲ್ಲಿ ಒಂದಾಗಿರುವ ರಾಜಸ್ಥಾನ್ ರಾಯಲ್ಸ್ ತಂಡದ ಮುಖ್ಯ ಕೋಚ್ ಸ್ಥಾನಕ್ಕೆ ಕನ್ನಡಿಗ ರಾಹುಲ್ ದ್ರಾವಿಡ್ ಗುಡ್ ಬೈ ಹೇಳುವ ಮೂಲಕ ಶಾಕ್ ಕೊಟ್ಟಿದ್ದಾರೆ. ಈ ಬಗ್ಗೆ ರಾಜಸ್ಥಾನ್ ರಾಯಲ್ಸ್ ಫ್ರಾಂಚೈಸಿ ತನ್ನ ಅಧಿಕೃತ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಪೋಸ್ಟ್ ಅನ್ನು ಹಂಚಿಕೊಂಡಿದೆ. ಅಲ್ಲದೆ, ದ್ರಾವಿಡ್ ಅವರೇ ಆರ್‌ಆರ್ ತಂಡದ ಮುಖ್ಯ ಕೋಚ್ ಹುದ್ದೆಯನ್ನು ತೊರೆಯುವುದಾಗಿ ನಿರ್ಧರಿಸಿದ್ದಾರೆ ಎಂದು ತಿಳಿದುಬಂದಿದೆ.ರಾಹುಲ್ ದ್ರಾವಿಡ್ ಕಳೆದ ವರ್ಷವಷ್ಟೇ ರಾಜಸ್ಥಾನ ರಾಯಲ್ಸ್ ತಂಡದ ಮುಖ್ಯ ಕೋಚ್ ಹುದ್ದೆಯನ್ನು ಅಲಂಕರಿಸಿದ್ದರು. **2024**ರ ಟಿ-**20** ವಿಶ್ವಕಪ್ ಬಳಿಕ ಟೀಂ ಇಂಡಿಯಾದ ಮುಖ್ಯ ಕೋಚ್ ಹುದ್ದೆಗೆ ಗುಡ್ ಬೈ ಹೇಳುದ್ದ ರಾಹುಲ್ ದ್ರಾವಿಡ್, ರಾಜಸ್ಥಾನ ರಾಯಲ್ಸ್ ತಂಡ ಸೇರಿಕೊಂಡ್ರು. ಇದಕ್ಕೂ ಮುಂಚೆ ಅವರು **2011**ರಿಂದ **2013**ರ ವರೆಗೆ ಆಟಗಾರನಾಗಿ ಈ ತಂಡದ ಭಾಗ ಆಗಿದ್ದರು. ಬಳಿಕ **2015**ರ ವರೆಗೆ ಆರ್‌ಆರ್ ತಂಡದ ಮುಖ್ಯ ಕೋಚ್ ಆಗಿ ಕರ್ಯವ್ಯ ನಿರ್ವಹಿಸಿದ್ದರು. ಆದರೆ ಇದೀಗ ದಿಢೀರ್ ರಾಜೀನೇಮೆ ಘೋಷಿಸಿ ಅಚ್ಚರಿ ಮೂಡಿಸಿದ್ದಾರೆ.

ಆರ್‌ಆರ್ ಫ್ರಾಂಚೈಸಿ ಹೇಳಿರುವುದೇನು?

ಇನ್ನು ರಾಜಸ್ಥಾನ ರಾಯಲ್ಸ್ ತಂಡದ ಮುಖ್ಯ ಕೋಚ್ ರಾಹುಲ್ ದ್ರಾವಿಡ್ ಅವರು **2026**ರ ಐಪಿಎಲ್ಗೂ ಮೊದಲು ಮುಖ್ಯ ಕೋಚ್ ಹುದ್ದೆಯಿಂದ ಕೆಳಗಿಳಿದಿದ್ದಾರೆ. ಅವರು ಹಲವು ವರ್ಷಗಳಿಂದ ತಂಡದ ಪ್ರಯಾಣದ ಕೇಂದ್ರಬಿಂದು ಆಗಿದ್ದಾರೆ. ಅವರ ನಾಯಕತ್ವವು ಒಂದು ಪೀಳಿಗೆಯ ಆಟಗಾರರ ಮೇಲೆ ಪ್ರಭಾವ ಬೀರಿದೆ. ತಂಡದೊಳಗೆ ಬಲವಾದ ಮೌಲ್ಯಗಳನ್ನು ನಿರ್ಮಿಸಿದೆ. ಅವರಿಗೆ ದೊಡ್ಡ ಹುದ್ದೆಯನ್ನು ನೀಡಲು ನಿರ್ಧರಿಸಲಾಗಿತ್ತು. ಆದರೆ, ಆ ಜವಾಬ್ದಾರಿಯನ್ನು ತೆಗೆದುಕೊಳ್ಳಲು ನಿರಾಕರಿಸಿದ್ದಾರೆ ಎಂದು ಫ್ರಾಂಚೈಸಿ ತಿಳಿಸಿದೆ. ಅಲ್ಲದೆ, ದ್ರಾವಿಡ್ ಅವರ ಸೇವೆಗಳಿಗೆ ಹೃತ್ಪೂರ್ವಕ ಧನ್ಯವಾದಗಳು ಎಂದು ರಾಜಸ್ಥಾನ್ ರಾಯಲ್ಸ್ ಇನ್ಸ್ಟಾಗ್ರಾಂ ಖಾತೆಯಲ್ಲಿ ಹಂಚಿಕೊಂಡಿದೆ.

## 'ಕಾಂಗ್ರೆಸ್ ಪಕ್ಷ ಮತ ಕಳ್ಳತನ ಬಯಲು ಮಾಡಿದ ಸಿದ್ದರಾಮಯ್ಯ'



**1991** ರ ಲೋಕಸಭೆ ಚುನಾವಣೆಯಲ್ಲಿ ನನ್ನನ್ನು ಮೋಸದಿಂದ ಸೋಲಿಸಲಾಯಿತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿಕೆ ನೀಡಿದ್ದರು. ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಆರ್ ಅಶೋಕ್ ಅವರು, "ಮತಗಳ್ಳತನ"ದ ಎಂಬ ಕಪೋಲಕಲ್ಪಿತ ನಾಟಕದ ಬಗ್ಗೆ ಸತ್ಯ ನುಡಿದಿದ್ದ ಮಾಜಿ ಸಚಿವ ಕೆ ಎನ್ ರಾಜಣ್ಣ ಅವರನ್ನು ಅತ್ಯಂತ ಅಗೌರವವಾಗಿ ಸಂಪುಟದಿಂದ ವಜಾ ಮಾಡಿದ್ದ ರಾಹುಲ್ ಗಾಂಧಿ ಅವರಿಗೆ, ಈಗ ಕಾಂಗ್ರೆಸ್ ಪಕ್ಷದ ಮೋಸವನ್ನು ಬಯಲು ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ, ಕಾಂಗ್ರೆಸ್ ಪಕ್ಷದಿಂದ ವಜಾ ಮಾಡುವ ಧೈರ್ಯ ಇದೆಯಾ? ಅಥವಾ ಪಕ್ಷದ ಪ್ರತಾಪ, ಶಿಸ್ತು ಕ್ರಮ ಏನಿದ್ದರೂ ದಲಿತ ನಾಯಕರ ಮೇಲೆ ಪ್ರಯೋಗ ಮಾಡಲು ಮಾತ್ರ ಸೀಮಿತನಾ? ಎಂದು ಪ್ರಶ್ನಿಸಿದರು.**2018**ರಲ್ಲಿ ಸಿದ್ದರಾಮಯ್ಯನವರು ಬಾದಾಮಿಯಲ್ಲಿ ಹೇಗೆ ಮತ ಖರೀದಿ ಮೂಲಕ ಗೆದ್ದರು ಎಂದು ಮಾಜಿ ಕೇಂದ್ರ ಸಚಿವ ಸಿ.ಎಂ.ಇಬ್ರಾಹಿಂ ಅವರು ಈಗಾಗಲೇ ಬಯಲು ಮಾಡಿದ್ದಾರೆ. ಪಂಚಾಯಿತಿ ಇಂದ ಪಾರ್ಲಿಮೆಂಟ್ ವರೆಗೆ ಕಾಂಗ್ರೆಸ್ ಪಕ್ಷದ ಏಕಚಕ್ರಾಧಿಪತ್ಯ ಇದ್ದ ಕಾಲದಲ್ಲಿ, "ಆಗೆಲ್ಲಾ ಇವಿಎಂ ಇರಲಿಲ್ಲ, ಒಬ್ರೋ ಇಬ್ರೋ ಕೂತ್ಕೊಂಡು ಒತ್ತು ಬುಡ್ತೋ ಅನ್ನೋರು" ಎಂದು ಕಾಂಗ್ರೆಸ್ ಪಕ್ಷ **60** ವರ್ಷ ಹೇಗೆ ಚುನಾವಣೆ ಗೆಲ್ಲುತ್ತಿತ್ತು ಎನ್ನುವುದನ್ನ ಗೃಹ ಸಚಿವ ಪರಮೇಶ್ವರ್ ಅವರು ಲೀಲಾಜಾಲವಾಗಿ ವಿವರಿಸಿದ್ದಾರೆ.ನಮ್ಮ ದೇಶದಲ್ಲಿ ಮತಗಳ್ಳತನ, ಚುನಾವಣಾ ಅಕ್ರಮದ ಪಿತಾಮಹ ಯಾರಾದರೂ ಇದ್ದರೆ ಅದು ಕಾಂಗ್ರೆಸ್ ಪಕ್ಷ ಮತ್ತು ನೆಹರೂ-ಗಾಂಧಿ ಕುಟುಂಬ. ಮತಗಳ್ಳತನದ ಬಗ್ಗೆ ರಾಹುಲ್ ಗಾಂಧಿ ಅವರು ಮಾತನಾಡಿದರೆ ಅದು ಭೂತದ ಬಾಯಲ್ಲಿ ಭಗವದ್ಗೀತೆ ನುಡಿದಂತೆ. ಸಿಎಂ ಸಿದ್ದರಾಮಯ್ಯನವರು ಹಿಂದಿನ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಮತಗಳ್ಳತನ ಆಗಿದೆ ಎಂದು ಹೇಳಿದ್ದು, ಈಗ ಅವರೇ ಹೋರಾಟಕ್ಕೆ ಸೇರಿದ್ದಾರೆ. ಕಾಂಗ್ರೆಸ್ ಪರವಾಗಿ ಅವರು ಹೇಗೆ ಹೋರಾಡುತ್ತಾರೆ ಎಂದು ಅರ್ಥವಾಗುತ್ತಿಲ್ಲ. ಇದರಿಂದಾಗಿ ಕಾಂಗ್ರೆಸ್ ಮಾಡುತ್ತಿರುವ ಹೋರಾಟ ಸುಳ್ಳು ಎಂದು ಸಾಬೀತಾಗಿದೆ. ಬಿಜೆಪಿ ಮೇಲೆ ಮಾಡಿರುವ ಸುಳ್ಳು ಎಂದು ಸಾಬೀತಾಗಿದೆ. ಮತಗಳ್ಳತನ ಕಾಂಗ್ರೆಸ್‌ನ ಸಂಸ್ಕೃತಿಯಾಗಿದೆ ಎಂದು ತಿಳಿದುಬಂದಿದೆ. ಸಿ.ಎಂ.ಇಬ್ರಾಹಿಂ ಬಾದಾಮಿ ಕ್ಷೇತ್ರದಲ್ಲಿ ಮತ ಖರೀದಿಸಿದ್ದೇನೆಂದು ಹೇಳಿದ್ದಾರೆ. ಈ ಬಗ್ಗೆ ಅವರು ಉತ್ತರ ನೀಡಬೇಕು ಎಂದು ಆಗ್ರಹಿಸಿದರು.ಡಿ.ಕೆ.ಶಿವಕುಮಾರ್ ಒಬ್ಬಂಟಿಯಾಗಿ ಬಿಹಾರ ಚುನಾವಣೆಗೆ ಹೋದರೆ, ಸಿಎಂ ಸಿದ್ದರಾಮಯ್ಯ ತಂಡ ಬೇರೆ ಕಡೆ ಚುನಾವಣೆಗೆ ಹೋಗಿದೆ. ಡಿ.ಕೆ.ಶಿವಕುಮಾರ್ ಬಂಡೆಯಂತೆ ಆಗುತ್ತಿದ್ದಾರೆ. ಇವರು ಚಾಮುಂಡಿ ಬೆಟ್ಟವನ್ನು ಹಿಂದೂಗಳ ಆಸ್ತಿಯಲ್ಲ ಎನ್ನುವುದಾದರೆ, ಈ ದೇವಸ್ಥಾನಕ್ಕೆ ಯಾವಾಗ ಮುಲ್ಲಾಗಳನ್ನು ಹಾಗೂ ಪಾದ್ರಿಗಳನ್ನು ನೇಮಿಸುತ್ತಾರೆ? ಸಿಎಂ ಸಿದ್ದರಾಮಯ್ಯ ಅಧಿಕಾರಕ್ಕೆ ಬಂದಾಗಲೆಲ್ಲ ಹಿಂದೂಗಳ ಕಗ್ಗೊಲೆಯಾಗಿದೆ. ಅವರು ಯಾವಾಗಲೂ ಹಿಂದೂ ವಿರೋಧಿ ಎಂದರು.

## ನಾವು ಗ್ಯಾರಂಟಿಗಳನ್ನು ಚುನಾವಣೆಗಾಗಿ ಮಾಡುತ್ತಿದ್ದೇವೆ ಎಂದು ಪ್ರತಿಪಕ್ಷಗಳು ಟೀಕೆ ಮಾಡಿದವು.




ಭಾರತೀಯ ರೈಲ್ವೆ ಸಚಿವಾಲಯವು ಕರ್ನಾಟಕದಲ್ಲಿ ವಿವಿಧ ಯೋಜನೆಗಳಿಗೆ ಅನುಮೋದನೆ ನೀಡಿದೆ. ತಡವಾಗುತ್ತಿರುವ ಯೋಜನೆಗಳಿಗೆ ರೈಲ್ವೆ ಸಚಿವ ವಿ.ಸೋಮಣ್ಣ ಅವರು ಈಗಾಗಲೇ ಸೂಕ್ತ ನಿರ್ದೇಶನ ನೀಡಿದ್ದಾರೆ. ಇದೀಗ ದಶಕಗಳ ಬಳಿಕ **206** ಕಿ.ಮೀ. ತುಮಕೂರು-ರಾಯದುರ್ಗ ಹೊಸ ಮಾರ್ಗ ಯೋಜನೆಯಲ್ಲಿ ತಕ್ಕ ಮಟ್ಟಿನ ಪ್ರಗತಿ ಆಗಿದೆ ಎಂದು ರೈಲ್ವೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.ಈ ರೈಲ್ವೆ ಯೋಜನೆಯು ಬಳ್ಳಾರಿಗೆ ತೆರಳುವವರ ಪ್ರಯಾಣದ ಸಮಯ, ದೂರವನ್ನು ಕಡಿಮೆ ಮಾಡಲಿದೆ. **2027**ರ ಹೊತ್ತಿಗೆ ಯೋಜನೆ ಪೂರ್ಣಗೊಳ್ಳುವುದು ಅನುಮಾನ ಎನ್ನಲಾಗಿದೆ. ಈ ಮಧ್ಯೆ **83** ಕಿಲೋ ಮೀಟರ್ ಮಾರ್ಗವು ಕಾರ್ಯಾರಂಭಗೊಳ್ಳಲಿದೆ ಎಂದು ನೈಋತ್ಯ ರೈಲ್ವೆ ತಿಳಿಸಿದೆ. ಕೆಲವೆಡೆ ಭೂಸ್ವಾಧೀನ ಕೊಂಚ ಬಾಕಿ ಇದೆ. ಯೋಜನೆ ಮೊದಲು **2025**ಕ್ಕೆ ಪೂರ್ಣಗೊಳಿಸಲು ಯೋಜಿಸಲಾಗಿತ್ತು. ಸದ್ಯ **2027**ಕ್ಕೆ ಗಡುವು ನೀಡಲಾಗಿದೆ. ಹಾಗಾದ್ರೆ ಈ ಯೋಜನೆಯಿಂದ ಏನೆಲ್ಲ ಪ್ರಯೋಜನ, ಮಾರ್ಗಗಳ ವಿವರ ಇಲ್ಲಿದೆ.

ಹೊಸ ರೈಲು ಮಾರ್ಗದ ಪ್ರಯೋಜನಗಳು

**206** ಕಿ.ಮೀ. ತುಮಕೂರು-ರಾಯದುರ್ಗ ಹೊಸ ರೈಲು ಮಾರ್ಗ ಯೋಜನೆಯಿಂದ ಭವಿಷ್ಯದಲ್ಲಿ ತುಮಕೂರು ಮತ್ತು ಬಳ್ಳಾರಿ ನಡುವಿನ ಅಂತರ ಬರೋಬ್ಬರಿ **130** ಕಿ.ಮೀ ಕಡಿಮೆ ಆಗಲಿದೆ. ಇದು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ರೈಲು ಸಂಪರ್ಕವನ್ನು ಗಮನಾರ್ಹವಾಗಿ ಹೆಚ್ಚಿಸಿದಂತಾಗುತ್ತಿದೆ. ಸದ್ಯ ಈ ಯೋಜನೆಯಲ್ಲಿ **83** ಕಿ.ಮೀ ರೈಲು ಸಿದ್ಧವಾಗಿದೆ. ಇದರಿಂದ ತುಮಕೂರು, ಮಡಕಶಿರ, ಪಾವಗಡ ಮತ್ತು ಕಲ್ಯಾಣದುರ್ಗ ನಡುವಿನ ಸಂಪರ್ಕವನ್ನು ಸುಧಾರಣೆ ಆಗಲಿದೆ.

## ಮತ್ತೆ ಮುನ್ನಲೆಗೆ ಬಂದ ಬೆಂಗಳೂರು-ತುಮಕೂರು ರಾಷ್ಟ್ರೀಯ ಹೆದ್ದಾರಿ

ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿ ಜಾಲ ವಿಸ್ತರಣೆ ಆಗುತ್ತಲಿದೆ. ಈ ನಡುವೆಯೇ ಕೆಲ ಹೆದ್ದಾರಿಗಳಲ್ಲಿ ಸಮಸ್ಯೆಗಳ ಸರಮಾಲೆಯೇ ಎದುರಾಗುತ್ತಲಿವೆ. ಹಾಗಾದ್ರೆ, ಇದೀಗ ಬೆಂಗಳೂರು-ತುಮಕೂರು ರಾಷ್ಟ್ರೀಯ ಹೆದ್ದಾರಿಯ ಟೋಲ್ ಶುಲ್ಕ ಸಂಗ್ರಹ ಮುನ್ನೆಲೆಗೆ ಬಂದಿದೆ. ಹಾಗಾದ್ರೆ, ಇದಕ್ಕೆ ಕಾರಣ ಏನು ಎನ್ನುವ ಸಂಪೂರ್ಣ ಮಾಹಿತಿಯನ್ನು ಇಲ್ಲಿ ನೀಡಲಾಗಿದೆ

ತಿಳಿಯಿರಿ.ರಾಜ್ಯದಲ್ಲಿ ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ವೇ ಉದ್ಘಾಟನೆ ಆದಾಗಿನಿಂದಲೂ ಇದು ಒಂದಲ್ಲ ಒಂದು ವಿಚಾರಕ್ಕೆ ಸುದ್ದಿಯಲ್ಲಿರುತ್ತದೆ.

ಆರಂಭದಲ್ಲಿ ಟೋಲ್ ಶುಲ್ಕದ ವಿಚಾರವಾಗಿ ಟೋಲ್ ಸಿಬ್ಬಂದಿ ಹಾಗೂ ವಾಹನ ಸವಾರರ ನಡುವೆ ಮಾರಾಮಾರಿಯಂತಹ ಘಟನೆಗಳು ನಡೆದಿವೆ. ಈಗಲೂ ಕೂಡ ಇಲ್ಲಿ ಒಂದಲ್ಲ ವಿಚಾರಕ್ಕೆ ಸುದ್ದಿಯಾಗುತ್ತಲಿದೆ. ಹಾಗೆಯೇ ಇದೀಗ ಬೆಂಗಳೂರು-ತುಮಕೂರು ಹೆದ್ದಾರಿ ಟೋಲ್ ಸಂಗ್ರಹದ ವಿಚಾರ ಭಾರೀ ದೊಡ್ಡ ಮಟ್ಟದಲ್ಲಿ ಸದ್ದು ಮಾಡುತ್ತಿದೆ. ಅದೇನು ಎನ್ನುವ ಪ್ರಶ್ನೆ ಬಹುತೇಕರಲ್ಲಿ ಮೂಡಿರುತ್ತದೆ. ಅದಕ್ಕೆಲ್ಲ ಉತ್ತರ ಇಲ್ಲಿ ಕಣ್ಣಾಡಿಸಿ.ಬೆಂಗಳೂರು-ತುಮಕೂರು ಹೆದ್ದಾರಿಯಲ್ಲಿ ಟೋಲ್ ಸಂಗ್ರಹಕ್ಕೆ ಸಂಬಂಧಿಸಿದಂತೆ ವಾಹನ ಸವಾರರು ಆಕ್ರೋಶ ಹೊರಹಾಕಿದ್ದಾರೆ. ಟೋಲ್ ಸಂಗ್ರಹವನ್ನು ತಕ್ಷಣವೇ ನಿಲ್ಲಿಸಬೇಕೆಂದು ಆಗ್ರಹಿಸಿದ್ದಾರೆ. ರಾಷ್ಟ್ರೀಯ ಹೆದ್ದಾರಿ 48ರಲ್ಲಿ ರಸ್ತೆ ಅಗಲೀಕರಣದ ಕಾರ್ಯ ವಿಳಂಬ ಆಗಿದೆ. ಅಲ್ಲದೆ, ಟೋಲ್ ಕಾರ್ಯಾಚರಣೆ ಗುತ್ತಿಗೆ ಅವಧಿ ಮುಗಿದಿದ್ದರೂ ಸಹ ಟೋಲ್ ಸಂಗ್ರಹಣೆ ಮಾಡುತ್ತುದ್ದಾರೆ. ಈ ಸುಲಿಗೆಯನ್ನ ಈಗಿಂದೀಗಲೇ ನಿಲ್ಲಿಸಬೇಕೆಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI)ಕ್ಕೆ ಆಗ್ರಹಿಸಿದ್ದಾರೆ. ಬೆಂಗಳೂರು-ತುಮಕೂರು ರಾಷ್ಟ್ರೀಯ ಹೆದ್ದಾರಿ ಬೆಂಗಳೂರಿನಿಂದ ಹಿಡಿದು ಕರಾವಳಿ, ಮಲೆನಾಡು ಮತ್ತು ಉತ್ತರ ಕರ್ನಾಟಕಕ್ಕೆ ಹೋಗುವ ಸಂಪರ್ಕ ಸೇತುವೆಯಾಗಿದೆ. ಇನ್ನು ಈ ಹೆದ್ದಾರುಯ ನಾಗಸಂದ್ರ, ಕುಲುಮೆಪಾಳ್ಯ ಹಾಗೂ ಕ್ಯಾತಸಂದ್ರದಲ್ಲಿ ಟೋಲ್‌ಗಳಿವೆ. ಆದರೆ ರಸ್ತೆ ಕಾಮಗಾರಿ ನಡೆಯುತ್ತಿದ್ದು, ಇದರಿಂದ ಪ್ರತಿನಿತ್ಯವೂ ಸಮಸ್ಯೆ ಎದುರಿಸುವಂತಾಗಿದೆ ಅಂತಲೂ ವಾಹನ ಸವಾರರು ಆರೋಪ ಮಾಡಿದ್ದಾರೆ.ರಸ್ತೆ ಕಾಮಗಾರಿ ಪೂರ್ಣಗೊಳ್ಳದಿದ್ದರೂ ಕೂಡ ಏನಿಲ್ಲ ಅಂದರೂ ಈ ಎರಡು ಟೋಲ್‌ಗಳಲ್ಲಿ ಪ್ರತಿನಿತ್ಯ ಲಕ್ಷಾಂತರ ರೂಪಾಯಿ ಹಣವನ್ನು ಪೀಕಲಾಗುತ್ತಿದೆ.




ಆದ್ದರಿಂದ ಕಾಮಗಾರಿಯ ಮುಕ್ತಾಯ ಆಗುವವರೆಗೂ ಟೋಲ್ ಶುಲ್ಕವನ್ನು ನಿಲ್ಲಿಸಬೇಕೆಂದು ವಾಹನ ಸವಾರರು ಎನ್‌ಎಚ್‌ಎಐಗೆ ಆಗ್ರಹಿಸಿದ್ದಾರೆ. ಸಾಮಾನ್ಯವಾಗಿ ನಿಯಮದ ಪ್ರಕಾರ, ಯಾವುದೇ ಹೆದ್ದಾರಿಯ ಕಾಮಗಾರಿ ಪ್ರಗತಿಯಲ್ಲಿದ್ದರೆ ಅದು ಪೂರ್ಣಗೊಳ್ಳುವವರೆಗೂ ವಾಹನ ಸವಾರರ ಬಳಿ ಟೋಲ್ ಶುಲ್ಕವನ್ನು ಕಟ್ಟಿಸಿಕೊಳ್ಳಬಾರದು. ಇದು ಮುಕ್ತಾಯವಾದ ಬಳಿಕವೇ ಟೋಲ್ ಸಂಗ್ರಹ ಮಾಡಬೇಕಾಗುತ್ತದೆ.ಇನ್ನು ವಿಧಾನ ಪರಿಷತ್ತಿನಲ್ಲಿ ಈ ವಿಷಯನ್ನ ಕೂಡ ಚರ್ಚೆ ಮಾಡಲಾಗಿದೆ. ಸಚಿವ ಸತೀಶ್ ಜಾರಕಿಹೊಳಿ ಅವರು ಗುತ್ತಿಗೆ ಅವಧಿ ಮುಕ್ತಾಯ ಆಗಿದ್ದರೂ ಸಹ ಟೋಲ್ ಶುಲ್ಕ ಕಟ್ಟಿಸಿಕೊಳ್ಳುತ್ತಿದ್ದಾರೆ ಎಂದು ಹೇಳಿದರು. ಬಳಿಕ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಯೊಬ್ಬರು ಇದಕ್ಕೆ ಪ್ರತಿಕ್ರಿಯಿಸಿ ರಾಷ್ಟ್ರೀಯ ಹೆದ್ದಾರಿಗೆ ಟೋಲ್ ಅಧಿಸೂಚನೆ ಹೊರಡಿಸಿದರೆ, ಅದು ಶಾಶ್ವತವಾಗಿ ಮುಂದುವರಿಯುತ್ತದೆ ಎಂದು ಹೇಳಿದರು. ಇದಕ್ಕೆ ವಾಹನ ಸವಾರರು ಆಕ್ರೋಶ ಹೊರಹಾಕಿದ್ದು, ಟೋಲ್ ದರ ಹೆಚ್ಚಳ ಮಾಡಿದ್ದಾರೆ. ಈ ನಡುವೆಯೂ ಕಾಮಗಾರಿ ಪ್ರಗತಿಯಲ್ಲಿರುವಾಗಲೇ ಟೋಲ್ ಶುಲ್ಕ ಕಟ್ಟಿಸಿಕೊಳ್ಳಲಾಗುತ್ತಿದೆ. ಟೋಲ್ ಸಂಗ್ರಹವನ್ನು ತಕ್ಷಣ ನಿಲ್ಲಿಸಬೇಕು ಎಂದು ವಾಹನ ಸವಾರರು ಹಾಗೂ ಸಾರ್ವಜನಿಕರು ಎನ್‌ಎಚ್‌ಎಐಗೆ ಮನವಿ ಮಾಡಿದ್ದಾರೆ.

# ಈ ಕಾರಣಕ್ಕೆ ಆಸ್ತಿ ಮೌಲ್ಯ ಹೆಚ್ಚಳ: ಕಾರಣ ಕೊಟ್ಟ ಡಿ ಕೆ ಶಿವಕುಮಾರ್

**ಅಕ್ಷರ್ ವಿಜೇತ ,ಬೆಂಗಳೂರು :**

ಜನ ಸಾಮಾನ್ಯರ ಬದುಕು ಏಳಿಗೆಯಾಗಬೇಕು. ಎಲ್ಲರ ಬದುಕಿನಲ್ಲಿ ಹೊಸ ರೂಪ ಕಾಣಬೇಕು, ಎಲ್ಲರ ಆಸ್ತಿ ಮೌಲ್ಯ ಹೆಚ್ಚಳವಾಗಬೇಕು ಎನ್ನುವ ಕಾರಣಕ್ಕೆ ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರು ನಾಮಕರಣ ಮಾಡಿದ್ದೇವೆ. ಜನತಾದಳದ ನಾಯಕರು ದೆಹಲಿಗೆ ಹೋಗಿ ಜಿಲ್ಲೆಯ ಹೆಸರು ಬದಲಾವಣೆ ಸಾಧ್ಯವಿಲ್ಲ ಎಂದು ಬರೆಸಿದ್ದರು. ಕುಮಾರಣ್ಣ ಇದರ ವಿರುದ್ಧ ಬಂದ್ ಮಾಡಿಸಿದರು. ಆದರೂ ಸಹ ಹೆಸರು ಬದಲಾವಣೆಗಾಗಿ ನಾನು ದೊಡ್ಡ ಹೋರಾಟ ಮಾಡಿದೆ ಎಂದು ಡಿಸಿಎಂ ಡಿ ಕೆ ಶಿವಕುಮಾರ್ ತಿಳಿಸಿದರು.ಈ ವೇಳೆ ಮಾತು ಮುಂದುವರೆಸಿದ ಡಿ ಕೆ ಶಿವಕುಮಾರ್ ಅವರು, ಅವರ ಬದುಕನ್ನು ಏಳಿಗೆ ಮಾಡಿಕೊಳ್ಳಬೇಕು ಎಂದು ಇದೇ ಕುಮಾರಣ್ಣ ಹಾಸನದಿಂದ ಬೆಂಗಳೂರಿಗೆ ಬಂದು ಆಸ್ತಿ ತೆಗೆದುಕೊಂಡಿಲ್ಲವೇ? ರಾಮನಗರದಲ್ಲಿ ನೀವು, ನಿಮ್ಮ ತಂದೆಯವರು ರಾಜಕಾರಣ ಮಾಡಿದರೂ ನಾವು ಬೇಸರಿಸಿಕೊಳ್ಳಲಿಲ್ಲ. ನೀವು ನಿಮ್ಮ ಊರಿನಲ್ಲಿ ಆಸ್ತಿ ತೆಗೆದುಕೊಳ್ಳದೇ ಇಲ್ಲೇಕೆ ಆಸ್ತಿ ತೆಗೆದುಕೊಂಡಿರಿ? ಎಂದು ಪ್ರಶ್ನಿಸಿದರು.ಕೆಲವರು ರಾಮನಗರ ಜಿಲ್ಲೆ ಎಂದು ಹೇಳುತ್ತಿದ್ದರು. ಇದು ಬೆಂಗಳೂರು ದಕ್ಷಿಣ ಜಿಲ್ಲೆ. ಶಾಸಕರಾದ ಹುಲಿಕಟ್ಟೆ ಬಾಲಕೃಷ್ಣ, ದೊಡ್ಡ ಆಲಹಳ್ಳಿ ಕೆಂಪೇಗೌಡ ಶಿವಕುಮಾರ್, ಎಚ್.ಡಿ ಕುಮಾರಸ್ವಾಮಿ ಹೀಗೆ ನಮ್ಮ ಗುರುತನ್ನು ಅಳಿಸಲು ಸಾಧ್ಯವಿಲ್ಲ. ಅದೇ ರೀತಿ ನಾವು ಬೆಂಗಳೂರು ಜಿಲ್ಲೆಯವರಾದ ನಮ್ಮ ಅಸ್ಮಿತೆಯನ್ನು ಬಿಟ್ಟು ಕೊಡಲು ಸಾಧ್ಯವೇ? ಎಂದರು ಪ್ರಶ್ನಿಸಿದರು. ನಾನು ಹಿಂದೆ ಬೆಂಗಳೂರಿನ ಜಿಲ್ಲಾ ಪಂಚಾಯತಿ ಸದಸ್ಯನಾಗಿದ್ದೆ. ಹೀಗಿರುವಾಗ ನಮ್ಮ ಇತಿಹಾಸ ಕಳೆದುಕೊಳ್ಳಲು ಸಾಧ್ಯವೇ? ಜಿಲ್ಲೆಯ ಹೆಸರು ಬದಲಾವಣೆಯಿಂದ ಜನರ ಆಸ್ತಿ ಮೌಲ್ಯ ಹೆಚ್ಚಾಗಲಿದೆ. ಬೆಂಗಳೂರನ್ನು ಅಂತರರಾಷ್ಟ್ರೀಯ ನಗರವನ್ನಾಗಿ ಮಾಡಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮಾಡಿದ್ದೇವೆ, ಮೆಟ್ರೋ ಸುರಂಗಮಾರ್ಗ, ಡಬಲ್ ಡೆಕ್ಕರ್ ಹೀಗೆ ಹಲವಾರು ಯೋಜನೆ ರೂಪಿಸಿದ್ದೇವೆ ಎಂದರು.



## ಎಸ್ ಇ ಎಸ್ ಪಿ, ಟಿಎಸ್ ಪಿ ಅಡಿ 40 ಸಾವಿರ ಕೋಟಿ ಮೀಸಲಿಡಲಾಗಿದೆ.

ಎಸ್ ಇ ಎಸ್ ಪಿ, ಟಿಎಸ್ ಪಿ ಅಡಿ 40 ಸಾವಿರ ಕೋಟಿ ಮೀಸಲಿಡಲಾಗಿದೆ. ಕಳೆದ 30 ವರ್ಷಗಳಿಂದ ನಡೆಯುತ್ತಿದ್ದ ಒಳಮೀಸಲಾತಿ ವಿಚಾರವನ್ನು ನಾವು ಬಗೆಹರಿಸಿದ್ದೇವೆ. ಇದನ್ನು ಇಡೀ ದೇಶ ಗಮನಿಸುತ್ತಿದೆ. ಸರ್ವರಿಗೂ ಸಮಪಾಲು, ಸಮಬಾಳು ಎನ್ನುವ ತತ್ವವನ್ನು ಕಾಂಗ್ರೆಸ್ ಸರ್ಕಾರ ಅನುಸರಿಸುತ್ತಿದೆ. ಈ ರೀತಿಯ ಒಂದೇ ಒಂದು ಕೆಲಸವನ್ನು ದಳ-ಬಿಜೆಪಿಯವರು ಮಾಡಿದ್ದಾರೆಯೇ ಎಂದು ಡಿ ಕೆ ಶಿವಕುಮಾರ್ ಅವರು ಪ್ರಶ್ನಿಸಿದರು.ಹೈ ವೋಲ್ಟೇಜ್ ಡಿಸ್ಟ್ರಿಬ್ಯೂಷನ್ ಸಿಸ್ಟಮ್ ಯೋಜನೆಯ ಅಡಿ ಒಬ್ಬ ಅಥವಾ ಇಬ್ಬರು ರೈತರಿಗೆ ಟ್ರಾನ್ಸ್ ಫಾರ್ಮರ್ಸ್ ಗಳನ್ನು ಹಂಚಿದ ಇತಿಹಾಸ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರಕ್ಕೆ ಸಲ್ಲುತ್ತದೆ. ಇಡೀ ದೇಶದಲ್ಲಿಯೇ ಈ ಯೋಜನೆ ಗಮನ ಸೆಳೆದಿತ್ತು. ಯಾವ ಕ್ಷೇತ್ರದಲ್ಲಿಯೂ ಆಗದ ಕೆಲಸ ಇಲ್ಲಿ ಆಗಿದೆ. ಟ್ರಾನ್ಸ್ ಫಾರ್ಮರ್ ಗಳನ್ನು ದುರಸ್ತಿಗೊಳಿಸಲು ಈ ಹಿಂದೆ 30-40 ಸಾವಿರ ಲಂಚ ಕೇಳುತ್ತಿದ್ದರು. ಆದರೆ ಈಗ ರೈತರೇ ಇದನ್ನು ನಿರ್ವಹಣೆ ಮಾಡುವ ವ್ಯವಸ್ಥೆಯನ್ನು ನಾವು ಪರಿಚಯಿಸಿದೆವು ಎಂದರು.

## ನಾವು ಗ್ಯಾರಂಟಿಗಳನ್ನು ಚುನಾವಣೆಗಾಗಿ ಮಾಡುತ್ತಿದ್ದೇವೆ ಎಂದು ಪ್ರತಿಪಕ್ಷಗಳು ಟೀಕೆ ಮಾಡಿದವು.

ನಾವು ಗ್ಯಾರಂಟಿಗಳನ್ನು ಚುನಾವಣೆಗಾಗಿ ಮಾಡುತ್ತಿದ್ದೇವೆ ಎಂದು ಪ್ರತಿಪಕ್ಷಗಳು ಟೀಕೆ ಮಾಡಿದವು. ಆದರೆ ನಾವು ಅಧಿಕಾರಕ್ಕೆ ಬಂದ ಕೆಲವೇ ದಿನಗಳಲ್ಲಿ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದೆವು ಹಾಗೂ ಮಹಿಳೆಯರ ಖಾತೆಗೆ ಹಣ ಹಾಕಿದೆವು. ನಿಮ್ಮ ಮನೆಯ ದೀಪ ಬೆಳಗಿ, ಹೊಟ್ಟೆ ತುಂಬಾ ಅನ್ನ ನೀಡಿದೆವು, ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ನೀಡಿ ಅವರ ಸಬಲೀಕರಣಕ್ಕೆ ನಾಂದಿ ಹಾಡಲಾಯಿತು ಎಂದರು ದೇವೇಗೌಡರು, ಕುಮಾರಸ್ವಾಮಿ, ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಇವರುಗಳ ಬಗ್ಗೆ ನಾನು ಮಾತನಾಡಲು ಹೋಗುವುದಿಲ್ಲ. ಇವರುಗಳು ಅಧಿಕಾರದಲ್ಲಿದ್ದಾಗ ಜನರ ಹೊಟ್ಟೆ ತುಂಬಿಸುವ ಜನಪರವಾದ ಒಂದೇ ಒಂದು ಕೆಲಸ ಮಾಡಿದ್ದರೆ ತಿಳಿಸಲಿ. ಉಳುವವನೆ ಭೂಮಿ ಒಡೆಯ, ಪಿಂಚಣಿ, ಆಶಾ, ಪಡಿತರ ವ್ಯವಸ್ಥೆ, ಅಂಗನವಾಡಿ ಕಾರ್ಯಕ್ರಮ ಸೇರಿದಂತೆ ನೂರಾರು ಕಾರ್ಯಕ್ರಮ ಮಾಡಿದ್ದು ಕಾಂಗ್ರೆಸ್ ಸರ್ಕಾರ. ನಾವು ಜಾತಿ ಮಾಡಿದವರಲ್ಲ ನೀತಿ ಮಾಡಿದವರು ಎಂದರು.

# ಕರ್ನಾಟಕ ಡಿಜಿ, ಐಜಿಪಿಯಾಗಿ ಎಂಎ ಸಲೀಂ ನೇಮಕ




ಅಕ್ಷರ್ ವಿಜೇತ |

ಕರ್ನಾಟಕದ ಡಿಜಿ, ಐಜಿಪಿಯಾಗಿ ಹಿರಿಯ ಐಪಿಎಸ್ ಅಧಿಕಾರಿ ಎಂ.ಎ ಸಲೀಂ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಹಾಗಾದ್ರೆ ಇವರು ಯಾವ ಬ್ಯಾಚ್ ಹಾಗೂ ಯಾರ ಸ್ಥಾನಕ್ಕೆ ನೇಮಕ ಮಾಡಲಾಗಿದೆ ಎನ್ನುವ ಸಂಪೂರ್ಣ ಮಾಹಿತಿಯನ್ನು ಇಲ್ಲಿ ನೀಡಲಾಗಿದೆ ತಿಳಿಯಿರಿ.ಐಪಿಎಸ್ ಅಧಿಕಾರಿ ಡಾ. ಎಂ.ಎ ಸಲೀಂ ಅವರನ್ನು ರಾಜ್ಯ ಪೊಲೀಸ್ ಮಹಾನಿರ್ದೇಶಕರಾಗಿ ನೇಮಿಸುವ ರಾಜ್ಯ ಸರ್ಕಾರದ ನಡೆಯನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿದೆ. ಇದರ ಬೆನ್ನಲ್ಲೇ ರಾಜ್ಯ ಸರ್ಕಾರ ಈ ಆದೇಶವನ್ನು ಹೊರಡಿಸಿದೆ.ಯುಪಿಎಸ್‌ಸಿಯಿಂದ ಆಯ್ಕೆ ಪಟ್ಟಿ ಬಂದ ಒಂದು ವಾರದ ಒಳಗೆ ನಿಯಮಿತ ಡಿಜಿಪಿಯನ್ನು ನೇಮಕ ಮಾಡಲಾಗುವುದು ಎಂದು ಸರ್ಕಾರ ಕೋರ್ಟ್‌ಗೆ ತಿಳಿಸಿತ್ತು. ಅದರಂತೆಯೇ ಇದೀಗ ಹಿರಿಯ ಐಪಿಎಸ್ ಅಧಿಕಾರಿ ಎಂ.ಎ ಸಲೀಂ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. **1993**ರ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾದ ಡಾ. ಸಲೀಂ ಅವರು ಅಲೋಕ್ ಮೋಹನ್ ನಿವೃತ್ತರಾದ ಬಳಿಕ ಡಿಜಿಪಿ ಆಗಿ ಅಧಿಕಾರ ವಹಿಸಿಕೊಂಡರು.ಡಾ.ಸಲೀಂ ಸದ್ಯ ಇದೀಗ ಸಿಐಡಿಯ ಡಿಜಿಪಿ ಆಗಿದ್ದಾರೆ. ಜೊತೆಗೆ ರಾಜ್ಯದ ಡಿಜಿಪಿ, ಐಜಿಪಿಯ ಹೆಚ್ಚುವರಿ ಜವಾಬ್ದಾರಿಯನ್ನು ಸಹ ಹೊಂಡಿದ್ದಾರೆ. ಹೈಕೋರ್ಟ್ ಈ ಅರ್ಜಿಯನ್ನ ವಜಾಗೊಳಿಸಿದ್ದು, ಶೀಗ್ರದಲ್ಲೇ ಸರ್ಕಾರವು ಡಿಜಿಪಿ ಹುದ್ದೆಗೆ ನೇಮಕ ಮಾಡುವುದಾಗಿ ಹೇಳಿತ್ತು. ಅದಂತೆಯೇ ಇದೀಗ ಆ ಹುದ್ದೆಗೆ ನೇಮಕಗೊಳಿಸಿ ಆದೇಶ ಹೊರಡಿಸಿದೆ.ಐಪಿಎಸ್ ನಿಯಮಗಳು **2016**ರ ಪ್ರಕಾರ, ಈ ಹುದ್ದೆಯು ಅಪೆಕ್ಸ್ ಸ್ಕೇಲ್, ಹಂತ-**17**ರ ಅಡಿಯಲ್ಲಿ **2,25,000** ರೂಪಾಯಿ ನಿಗದಿತ ವೇತನವನ್ನು ಹೊಂದಿದೆ ಅಂತಾ ಆದೇಶದಲ್ಲಿ ತಿಳಿಸಲಾಗಿದೆ. ಮುಂದಿನ ಆದೇಶದವರೆಗೆ ಡಾ.ಸಲೀಂ ಅವರು ಈ ಹುದ್ದೆಯಲ್ಲಿ ಮುಂದುವರೆಯಲಿದ್ದಾರೆ ಎಂದು ಸರ್ಕಾರದ ಅಧಿಸೂಚನೆಯಲ್ಲಿ ತಿಳಿಸಿದೆ.ಕಾಯಂ ಪೊಲೀಸ್ ಡಿಜಿ-ಐಜಿಪಿ ನೇಮಕ ಮಾಡುವ ಕುರಿತು ಇನ್ನೊಂದು ವಾರದಲ್ಲಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ರಾಜ್ಯ ಸರ್ಕಾರ ಗುರುವಾರ ಹೈಕೋರ್ಟ್‌ಗೆ ತಿಳಿಸಿತ್ತು.ಪ್ರಭಾರ ಡಿಜಿ, ಐಜಿಪಿಯನ್ನಾಗಿ ಎಂ.ಎ.ಸಲೀಂ ಅವರನ್ನು ನೇಮಕ ಮಾಡಿರುವ ಆದೇಶ ರದ್ದು ಕೋರಿ ವಕೀಲೆ ಸುಧಾ ಕಾಟ್ವಾ ಸಲ್ಲಿಕೆ ಮಾಡಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾ.ಸಿ.ಎಂ. ಜೋಶಿ ಅವರಿದ್ದ ವಿಭಾಗೀಯ ಪೀಠದ ಮುಂದೆ ವಿಚಾರಣೆಗೆ ಬಂದಾಗ ಈ ಸ್ಪಷ್ಟನೆ ನೀಡಿತ್ತು.ಇನ್ನು ಸರ್ಕಾರ ಪರ ಅಡ್ವೊಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ ಅವರು, ರಾಜ್ಯ ಪೊಲೀಸ್ ಮಹಾನಿರ್ದೇಶಕರ ನೇಮಕ ಸಂಬಂಧ ಆಗಸ್ಟ್ **26**ರಂದು ಕೇಂದ್ರ ಲೋಕಸೇವಾ ಆಯೋಗದ ಆಯ್ಕೆ ಸಮಿತಿ ಸಭೆ ನಡೆದಿದೆ. ಈ ಸಭೆಯ ಶಿಫಾರಸನ್ನು ಆಧರಿಸಿ ರಾಜ್ಯದ ಕಾಯಂ ಪೊಲೀಸ್ ಮಹಾನಿರ್ದೇಶಕರನ್ನು ನೇಮಕ ಮಾಡುವ ಬಗ್ಗೆ ಇನ್ನೊಂದು ವಾರದಲ್ಲಿ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದರು.

ಇದನ್ನು ದಾಖಲಿಸಿಕೊಂಡ ನ್ಯಾಯಪೀಠ, ಪೊಲೀಸ್ ಮಹಾನಿರ್ದೇಶಕರ ನೇಮಕ ವಿಚಾರದಲ್ಲಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್‌ನ ನಿರ್ದೇಶನಗಳನ್ನು ಪಾಲಿಸಿದೆ. ಆದ್ದರಿಂದ ಅರ್ಜಿ ವಿಚಾರಣೆ ಮುಂದುವರೆಸುವ ಅವಶ್ಯಕತೆಯಿಲ್ಲ ಎಂದು ಹೇಳಿ ಅರ್ಜಿ ಇತ್ಯರ್ಥಪಡಿಸಿತ್ತು.

# ಗೃಹಲಕ್ಷ್ಮಿ 3 ಕಂತುಗಳ 6,000 ರೂಪಾಯಿ ಹಣ ಜಮೆ ಬಗ್ಗೆ..




ಅಕ್ಷರ್ ವಿಜೇತ |

ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಪಂಚ ಗ್ಯಾರಂಟಿಗಳನ್ನು ಜಾರಿಗೊಳಿಸಿದೆ. ಈ ಪೈಕಿ ಗೃಹಲಕ್ಷ್ಮಿ ಪ್ರಮುಖ ಯೋಜನೆಯಾಗಿದ್ದು, ಇದರ ಅಡಿಯಲ್ಲಿ ಪ್ರತಿ ಮನೆ ಯಜಮಾನಿ ಬ್ಯಾಂಕ್ ಖಾತೆಗೆ ಪ್ರತಿ ತಿಂಗಳು 2,000 ರೂಪಾಯಿ ಹಾಕಲಾಗುತ್ತಿದೆ. ಆದರೆ, 22, 23, 24ನೇ ಕಂತುಗಳು ಸೇರಿ 6,000 ರೂಪಾಯಿ ಬಾಕಿಯಿದೆ. ಇದು ಯಾವಾಗ ಬರಬಹುದು ಎಂಬ ಅಂದಾಜು ಮಾಹಿತಿಯನ್ನು ಇಲ್ಲಿ ನೀಡಲಾಗಿದೆ ತಿಳಿಯಿರಿ.

ಕಾಂಗ್ರೆಸ್ ಸರ್ಕಾರ ಜಾರಿ ಮಾಡಿರುವ ಗ್ಯಾರಂಟಿಗಳಲ್ಲಿ ಗೃಹಲಕ್ಷ್ಮಿ ಯೋಜನೆ ಕೂಡ ಒಂದಾಗಿದೆ. ಇದರಡಿಯಲ್ಲಿ ನೀಡಲಾಗುವ ಪ್ರತಿ ತಿಂಗಳು 2,000 ರೂಪಾಯಿಯಿಂದ ರಾಜ್ಯದಲ್ಲಿನ ಅದೆಷ್ಟೋ ಮಹಿಳೆಯರು ತಮ್ಮ ಮನೆ ಖರ್ಚು-ವೆಚ್ಚಗಳನ್ನು ನಿಭಾಯಿಸುತ್ತಿದ್ದಾರೆ. ಆದರೆ, ಕಳೆದ ಮೂರು ಕಂತುಗಳ ಹಣ ಬಾಕಿಯಿದ್ದು, ಇದು ಯಾವಾಗ ಬರುತ್ತದೆ ಎನ್ನುವುದು ಮಹಿಳೆಯ ಪ್ರಶ್ನೆಯಾಗಿದೆ. ಅಲ್ಲದೆ, ಆಕ್ರೋಶವನ್ನು ಸಹ ಹೊರಹಾಕುತ್ತಿದ್ದಾರೆ.ಕಳೆದ 21ನೇ ಕಂತಿನ ಹಣವನ್ನು ವರಮಹಾಲಕ್ಷ್ಮಿ ಹಬ್ಬದ ವೇಳೆ ಜಮೆ ಮಾಡಲಾಗಿತ್ತು. 22, 23, 24ನೇ ಕಂತಿನ ಹಣ ಕಳೆದ ಬಾರಿ ಹಬ್ಬದಂತೆ ಗಣೇಶ ಚತುರ್ಥಿ ದಿನದಂದು ಜಮೆಯಾಗುವ ಆಲೋಚನೆಯಲ್ಲಿ ಮಹಿಳೆಯರಿದ್ದರು. ಆದರೆ, ಈಗಾಗಲೇ ಗಣೇಶ ಚತುರ್ಥಿ ಆರಂಭವಾದರೂ ಯಾವುದೇ ಹಣ ಜಮೆಯಾಗಿಲ್ಲ ಎಂದು ಅಸಮಾಧಾನ ಹೊರಹಾಕುತ್ತಿದ್ದಾರೆ. ಇನ್ನೂ ಮುಂಬರುವ ತಿಂಗಳು ದಸರಾ ಆರಂಭ ಆಗಲಿದ್ದು, ಆ ವೇಳೆಯೇ ಮೂರು ಕಂತಿನ 6,000 ರೂಪಾಯಿ ಬ್ಯಾಂಕ್ ಖಾತೆಗೆ ಹಾಕುವ ಸಾಧ್ಯತೆಯಿದೆ ಎನ್ನಲಾಗುತ್ತಿದೆ.ಇಲ್ಲದಿದ್ದರೆ, ಎರಡು ಕಂತಿನ 4,000 ಹಣ ಹಾಕಿ ಮುಂದಿನ ಕಂತುಗಳ ಹಣವನ್ನು ಒಟ್ಟಿಗೆ ದೀಪಾವಳಿಗೆ ಹಾಕುವ ಸಾಧ್ಯತೆಯಿದೆ ಎನ್ನಲಾಗುತ್ತಿದೆ. ಆದರೆ, ಕೆಲ ಮಹಿಳೆಯರು ಮಾತ್ರ ಈಗಎರಡು ಕಂತುಗಳ ಹಣವನ್ನಾದರೂ ಮೊದಲು ಹಾಕಿ. ಆಮೇಲೆ ಉಳಿದ ಕಂತುಗಳ ಹಣ ಜಮಾ ಮಾಡಿ ಎಂದು ಹೇಳುತ್ತಿದ್ದಾರೆ. ಮತ್ತೊಂದೆಡೆ ಇನ್ನೂ ಕೆಲವರು ಎಲ್ಲಾವನ್ನು ಹಾಕಿ ಎಂದು ಹೇಳುತ್ತಿದ್ದಾರೆ. ಇತ್ತೀಚೆಗಷ್ಟೇ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಹೇಳಿದಂತೆ ಶೀಘ್ರದಲ್ಲೇ ಜಮೆ ಮಾಡುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.ಈಗಾಗಲೇ ಗೃಹಲಕ್ಷ್ಮೀಯರ ಖಾತೆಗೆ 21ನೇ ಕಂತಿನ ಹಣ ಬಿಡುಗಡೆ ಮಾಡಲಾಗಿದೆ. ಇನ್ನು 22ನೇ ಕಂತಿನ ಹಣವನ್ನು ಶೀಘ್ರದಲ್ಲೇ ಬಿಡುಗಡೆ ಮಾಡುವ ಸಾಧ್ಯತೆಯಿದೆ. ಯಾಕಂದ್ರೆ, 21ನೇ ಕಂತಿನ ಹಣವನ್ನು ವರಮಹಾಲಕ್ಷ್ಮೀ ಹಬ್ಬದಂದೇ ಹಾಕಲಾಗಿತ್ತು. ಹಾಗೆಯೇ ಮುಂಬರು ಹಬ್ಬದಂದೇ ಉಳಿದ ಎಲ್ಲಾ ಕಂತುಗಳು ಇಲ್ಲ ಅಂದ್ರೆ, ಎರಡು ಕಂತುಗಳ ಹಣ ಬಿಡುಗಡೆ ಮಾಡುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.ಆದರೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮಾಹಿತಿ ಪ್ರಕಾರ, ರಾಜ್ಯದಲ್ಲಿ ಗೃಹ ಲಕ್ಷ್ಮೀ ಯೋಜನೆ ಅಡಿಯಲ್ಲಿ ಒಟ್ಟು 1.24 ಕೋಟಿ ಫಲಾನುಭವಿಗಳು ಯಶಸ್ವಿಯಾಗಿ ಹಣ ಪಡೆದುಕೊಂಡಿದ್ದಾರೆ. ಯೋಜನೆ ಆರಂಭ ಆದಾಗಿನಿಂದ ಇಲ್ಲಿಯವರೆಗೆ ಒಟ್ಟು 1.06 ಕೋಟಿ ಫಲಾನುಭವಿಗಳು ಎಲ್ಲಾ ಕಂತುಗಳ ಧನ ಸಹಾಯ ಸ್ವೀಕರಿಸಿದ್ದಾರೆ ಎನ್ನುವ ಮಾಹಿತಿ ಇದೆ.2023-24ನೇ ಸಾಲಿನಲ್ಲಿ 17,000 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದ್ದು, ವೆಚ್ಚ ಭರಿಸಲಾಗಿದೆ 2024-25ನೇ ಸಾಲಿನಲ್ಲಿ 28,608.40 ಕೋಟಿ ರೂಪಾಯಿಗಳ ಅನುದಾನ ಬಿಡುಗಡೆ ಮಾಡಲಾಗಿದ್ದು, ಪೂರ್ತಿ ವೆಚ್ಚ ಭರಿಸಲಾಗಿದೆ. 2025-26ನೇ ಸಾಲಿನಲ್ಲಿ ಗೃಹಲಕ್ಷ್ಮಿ ಯೋಜನೆಯಡಿ 28,608 ಕೋಟಿಗಳ ಅನುದಾನ ನಿಗದಿಗೊಳಿಸಲಾಗಿದೆ ಎಂದು ತಿಳಿದುಬಂದಿದೆ.

# ಮದ್ಯ ಮಾರಾಟ ಬಂದ್... ಆಗಸ್ಟ್ 31 ಭಾನುವಾರ ಎಣ್ಣೆ ಮಾರಾಟ ನಿಷೇಧ




**ಆಗಸ್ಟ್ 31 ಭಾನುವಾರ ಎಣ್ಣೆ ಮಾರಾಟ ನಿಷೇಧ.. ರಮ್, ಬ್ರಾಂದಿ & ವಿಸ್ಕಿ, ಬಿಯರ್ ನಿಷೇಧ! ಹೌದು, ಕನ್ನಡಿಗರ ರಾಜಧಾನಿ ಬೆಂಗಳೂರಲ್ಲಿ ಸಾಮೂಹಿಕ ಗಣೇಶ ವಿಸರ್ಜನೆ ಹಿನ್ನಲೆ ಮುಂಜಾಗ್ರತೆಯ ಕ್ರಮ ಕೈಗೊಳ್ಳಲಾಗಿದೆ. ಇದೇ ಕಾರಣಕ್ಕೆ ಇದೀಗ ಆಗಸ್ಟ್ 31 ಭಾನುವಾರ ಬೆಂಗಳೂರು ನಗರದ ಹಲವು ಪ್ರದೇಶಗಳಲ್ಲಿ ಮದ್ಯ ಅಂದ್ರೆ ಲಿಕ್ಕರ್ ಅರ್ಥಾತ್ ಎಣ್ಣೆ ಮಾರಾಟಕ್ಕೆ ಬ್ರೇಕ್ ಹಾಕಲಾಗಿದೆ. ಬೆಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ, ಹಲವು ಭಾಗಗಳಲ್ಲಿ ಸಾಮೂಹಿಕ ಗಣೇಶ ಮೂರ್ತಿಗಳ ವಿಸರ್ಜನೆ ಕಾರ್ಯಕ್ರಮ ನಡೆಯಲಿದೆ. ಇದೇ ಕಾರಣಕ್ಕೆ ಇದೀಗ ಬೆಂಗಳೂರಿನ ಹಲವು ಪೊಲೀಸ್ ಠಾಣೆ ವ್ಯಾಪ್ತಿಯ CL-4 &cl-6 ಹೊರತುಪಡಿಸಿ ಉಳಿದ ಎಣ್ಣೆ ಅಂಗಡಿಗಳಲ್ಲಿ ಮದ್ಯ ಮಾರಾಟಕ್ಕೆ ಬ್ರೇಕ್‌ನ ಹಾಕಿ ಬಂದ್ ಮಾಡಲು ಆದೇಶ ಹೊರಡಿಸಲಾಗಿದೆ. ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ ಪ್ರಕಟಣೆಯ ಮೂಲಕ ಈ ಬಗ್ಗೆ ಮಾಹಿತಿ ನೀಡಿದೆ. ಹಾಗಾದ್ರೆ ಯಾವೆಲ್ಲಾ ಏರಿಯಾದಲ್ಲಿ ಮದ್ಯ ಮಾರಾಟ ಬಂದ್ ಆಗಿ ನಿಷೇಧ ಹೇರಲಾಗಿದೆ? ಮುಂದೆ ಓದಿ.**

ಹೌದು, ಕರ್ನಾಟಕದಲ್ಲಿ ಎಣ್ಣೆ ರೇಟ್ ಜಾಸ್ತಿ ಅಂತ ಕೊರಗುತ್ತಿದ್ದ ಮದ್ಯ ಪ್ರಿಯರಿಗೆ ಶಾಕ್ ಸಿಕ್ಕಿದ್ದು ಮತ್ತೆ ಮತ್ತೆ ಬಜೆಟ್‌ನಲ್ಲಿ ಎಣ್ಣೆ ರೇಟ್ ರೈಸ್ ಮಾಡ್ತಾ ಇರೋದು ಬೇಸರ ತರಿಸಿದೆ. 'ಮದ್ಯ' ಪ್ರಿಯರಿಗೆ ಹೀಗೆ ಎಣ್ಣೆ ಬೆಲೆ ಜಾಸ್ತಿ ಆಗುತ್ತಿರುವ ಕಾರಣ ಪ್ರತಿ ತಿಂಗಳೂ 10,000 ರೂಪಾಯಿ ಅಥವಾ 20,000 ರೂಪಾಯಿ ಬರೀ ಎಣ್ಣೆ ಕುಡಿಯೋದಕ್ಕೆ ಅಂತಾನೇ ಎತ್ತಿ ಇಡಬೇಕು ಅನ್ನೋ ಪರಿಸ್ಥಿತಿ ಕೂಡ ಇದೆ. ಇಷ್ಟಾದರೂ ಎಣ್ಣೆ ರೇಟ್ ಎಷ್ಟು ಬೇಕಾದರೂ ಇರಲಿ, ನಾವು ಮಾತ್ರ ಕುಡಿಯೋದು ಗ್ಯಾರಂಟಿ ಅಂತಾರೆ ಕೋಟಿ ಕೋಟ್ಯಂತರ ಮದ್ಯ ಪ್ರಿಯರು. ಹೀಗಿದ್ದಾಗಲೇ, ಮದ್ಯ ಮಾರಾಟ ಬಂದ್... ಆಗಸ್ಟ್ 31 ಭಾನುವಾರ ಎಣ್ಣೆ ಮಾರಾಟ ನಿಷೇಧ...

ಆಗಸ್ಟ್ 31 ಭಾನುವಾರ ಎಣ್ಣೆ ನಿಷೇಧ...

ಎಣ್ಣೆ.. ಎಣ್ಣೆ.. ಎಣ್ಣೆ... ಹೀಗೆ ಶನಿವಾರ, ಭಾನುವಾರ ಬಂತು ಅಂದ್ರೆ, ಸಾಕು ಒಬ್ಬೊಬ್ಬರಿಗೆ ಒಂದು ಕ್ವಾಟರ್, ಇನ್ನೂ ಕೆಲವರಿಗೆ 2 ಕ್ವಾಟರ್ ಕೊಟ್ಟರೂ ಸಾಲಲ್ಲ. ಈ ನಡುವೆ 90 ಹೊಡೆದು ಫುಲ್ ಟೈಟ್ ಆಗಿ ಬೀಳುವವರು ಕೂಡ ಇದ್ದಾರೆ. ಎಲ್ಲಾ ಅವರ ಕೆಪಾಸಿಟಿ ಮೇಲೆ ಡಿಪೆಂಡ್ ಅಂತಾನೇ ಹೇಳಬಹುದು. ಹೋಗಲಿ ಬಿಡಿ, ನಮಗ್ಯಾಕೆ ಬೇರೆಯವರ ವಿಚಾರ... ಹೀಗೆ ವೀಕೆಂಡ್ ಬಂತು ಫುಲ್ ಪಾರ್ಟಿ ಮಾಡಿ ಎಂಜಾಯ್ ಮಾಡಿ ಮತ್ತೆ ಸೋಮವಾರದಿಂದ ಆಫಿಸ್ ಕಡೆ ಹೋಗೋಣ ಅಂತಾ ಕಾಯುತ್ತಿದ್ದವರಿಗೆ ಇದೀಗ ದಿಢೀರ್ ದೊಡ್ಡ ಆಘಾತವೇ ಎದುರಾಗಿಬಿಟ್ಟಿದೆ.

ಹೀಗಿದ್ದಾಗಲೇ, ಮದ್ಯ ಮಾರಾಟ ಬಂದ್...